# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:28.12.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ವೆಂಕಟೇಶ್ (ಕಾರ್ಯಪಾಲಕ ಅಭಿಯಂತರರು, ಟಿವಿಸಿಸಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ವೆಂಕಟೇಶ್ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 3 | ಶ್ರೀ ರಮೇಶ್ | ಹಿ. ಆ. ಪ. |
| 4 | ಶ್ರೀ ಆಶೀರ್ವಾದ | 17/ಬಿ, ಮೇಲ್ವಿಚಾರಕರು |
| 5 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು |
| 6 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು |
| 7 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು |
| 8 | ಶ್ರೀ ಮುರಳಿ | ಮೇಲ್ವಿಚಾರಕರು |
| 9 | ಅಲಿಸ್ಟರ್ | ಮೇಲ್ವಿಚಾರಕರು |
| | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

### 1. ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ:-

1ನೇ ಅಡ್ಡರಸ್ತೆ, ಎಸ್.ಬಿ.ಎಂ. ಕಾಲೋನಿಯಲ್ಲಿ ಪದೇ ಪದೇ ಮ್ಯಾನ್‌ಹೋಲ್ ಬ್ಲಾಕ್ ಸಮಸ್ಯೆ ಕಂಡುಬರುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸಂಬಂಧಪಟ್ಟ ಬಿಡಬ್ಲ್ಯೂಎಸ್‌ಎಸ್‌ಬಿ ಸಹಾಯಕ ಅಭಿಯಂತರರು ಸೂಕ್ತ ಕ್ರಮ ಕೈಗೊಂಡು ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಅಧ್ಯಕ್ಷರು ದೂರವಾಣಿ ಮುಖೇನ ಸೂಚಿಸಿದರು.

**(ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ತುರ್ತು ಕ್ರಮಕ್ಕಾಗಿ)**

Scanned with CamScanner

2) ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಿಸುವ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬೆಸ್ಕಾಂ) ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

3) ಮಾರ್ಷಲ್‌ಗಳ ಬಗ್ಗೆ:-

ಅಧ್ಯಕ್ಷರು ಮಾತನಾಡಿ, ವಾರ್ಡ್‌ನಲ್ಲಿ ಮಾರ್ಷಲ್‌ಗಳು ಈಗಾಗಲೇ ಮಾಸ್ಕ್ ಹಾಕದ ಸಾರ್ವಜನಿಕರರಿಗೆ ಸರ್ಕಾರದ ಆದೇಶದ ರೀತ್ಯಾ ದಂಡ ಹಾಕುತ್ತಿದ್ದು, ಅದರ ಜೊತೆ ವಾರ್ಡ್‌ನಲ್ಲಿರುವ ಅಂಗಡಿ ಮುಂಗಟ್ಟುಗಳಲ್ಲಿ ಸೇರಿರುವ ಜನರು 2ನೇ ಡೋಸ್ ಲಸಿಕೆ ಹಾಕಿದ್ದಾರೆಯೇ ಎಂದು ಪ್ರಮಾಣ ಪತ್ರವನ್ನು ಪರೀಕ್ಷಿಸಿ, ಅದನ್ನು ಸಂಬಂಧಪಟ್ಟ ಅಧಿಕಾರಿಗಳ ವೆಬ್‌ಸೈಟ್‌ಗೆ ಅಪ್ಲೋಡ್ ಮಾಡಲು ವೈದ್ಯಾಧಿಕಾರಿಗಳು ತಿಳಿಸಿದರು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವೆಂಕಟೇಶ್)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner